ಬಯಲು ರಂಗಮಂದಿರ

1448(1707); ಶ್ರೀ ಎಂ.ಟಿ. ಕೃಷ್ಣಪ್ಪ (ತುರುವೇಕೆರೆ)

ಅ) ತುರುವೇಕೆರೆ ಕ್ಷೇತ್ರದ ದಂಡಿನಶಿವರ ಹಾಗೂ ಪ್ರಥಮ ದರ್ಜೆ ಕಾಲೇಜು ಆವರಣದಲ್ಲಿ ಬಯಲು ರಂಗಮಂದಿರ ನಿರ್ಮಾಣಕ್ಕಾಗಿ ಹಣ ಬಿಡುಗಡೆ ಮಾಡಲು ಕೋರಲಾಗಿದ್ದ ಪ್ರಸ್ತಾವನೆಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು?

ಶ್ರೀಮತಿ ಉಮಾಶ್ರೀ (ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು)

ಅ) ಈ ಕುರಿತು ಯಾವುದೇ ಪ್ರಸ್ತಾವನೆ ಸ್ವೀಕೃತವಾಗಿರುವುದಿಲ್ಲ.

ಸಿ.ಎಂ.ಜಿ.ಎಸ್.ವೈ. ಸುವರ್ಣ ಗ್ರಾಮ ಯೋಜನೆ

1449(1708); ಶ್ರೀ ಕೃಷ್ಣಪ್ಪ ಎಂ.ಟಿ (ತುರುವೇಕೆರೆ)

ಅ) ಮುಖ್ಯಮಂತ್ರಿಗಳ ಗ್ರಾಮ ಸಡಕ್ ಯೋಜನೆ ಹಾಗೂ ಸುವರ್ಣ ಗ್ರಾಮ ಯೋಜನೆಗಳನ್ನು ಮುಂದುವರೆಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಈ ಯೋಜನೆಗಳನ್ನು ಮುಂದುವರೆಸುವ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಹೆಚ್.ಕೆ. ಪಾಟೀಲ್ (ಗ್ರಾ. ಮತ್ತು ಪಂ. ರಾಜ್ ಸಚಿವರು)

ಅ) ಹೌದು

ಆ) 2013–14ನೇ ಸಾಲಿನಲ್ಲಿ ಮುಖ್ಯ ಮಂತ್ರಿಗಳ ಗ್ರಾಮ ಸಡಕ್ ಯೋಜನೆ ಹಾಗೂ ಸುವರ್ಣ ಗ್ರಾಮೋದಯ ಯೋಜನೆಯನ್ನು ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:241:ಎಎಫ್ಎನ್:2013, ದಿನಾಂಕ:1–8–2013ರಲ್ಲಿ ಮುಂದುವರೆಸಲಾಗಿದೆ.